**ಕರ್ನಾಟಕಸರ್ಕಾರ**

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ 18ನೇ ಅಡ್ಡ ರಸ್ತೆ, ಬೆಂಗಳೂರು-12

-ಸಂಖ್ಯೆ:ಪಪೂಶಿ/ಶೈ.ಶಾ/ಪ್ರ.ದಾ.ಅ/2016-17 ದಿನಾಂಕ 05-08-2016.

# ಸುತ್ತೋಲೆ

ವಿಷಯ: 2016-17ನೇ ಶೈಕ್ಷಣಿಕ ಸಾಲಿಗೆ ಎಸ್ ಎಸ್ ಎಲ್ ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಥಮ ಪಿಯುಸಿ ತರಗತಿಗಳಿಗೆ ದಾಖಲಾತಿ ದಿನಾಂಕವನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ: ವಿದ್ಯಾರ್ಥಿಗಳು ಮತ್ತು ಪೋಷಕರಿಂದ ಬಂದ ಮನವಿಗಳು

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2016-17ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ತರಗತಿಗಳಿಗೆ 2016ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳಲು **ದಿನಾಂಕ 10-08-2016** ರವರೆಗೆ ಅಂತಿಮವಾಗಿ ದಿನಾಂಕವನ್ನು ವಿಸ್ತರಿಸಲಾಗಿದೆ. ದಾಖಲಾತಿಗೆ ನಿಗದಿಪಡಿಸಿರುವ ಶುಲ್ಕಗಳೊಂದಿಗೆ ವಿದ್ಯಾರ್ಥಿಗಳಿಂದ ಅವರ ಹಾಜರಾತಿಯನ್ನು ಶೇ.75ರಷ್ಟು ಕಾಯ್ದಿರಿಸಿಕೊಳ್ಳುವ ಕುರಿತು ಮುಚ್ಚಳಿಕೆಯನ್ನು ಪಡೆದುಕೊಂಡು ನಂತರವೇ ಕಾಲೇಜಿನ ಪ್ರಾಂಶುಪಾಲರು ಈ ಕೆಳಕಂಡ ದಂಡ ಶುಲ್ಕ ಪಡೆದು ನಿಯಮಾನುಸಾರ ದಾಖಲಾತಿಯನ್ನು ಮಾಡಿಕೊಳ್ಳುವುದು.

**ಪ್ರಥಮ ಪಿಯುಸಿಗೆ 2016ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ದಾಖಲಾಗಲು ಕೊನೆಯ ದಿನಾಂಕ 10-08-2016**
**(ಪುನಃ ಯಾವುದೇ ಕಾರಣಕ್ಕೂ ದಿನಾಂಕವನ್ನು ವಿಸ್ತರಿಸುವುದಿಲ್ಲ)**

**ನಿಯಮಾನುಸಾರ ನಿಗಧಿಪಡಿಸಿರುವ ಶುಲ್ಕದೊಂದಿಗೆ ದಂಡ ಶುಲ್ಕ ರೂ.504+ವಿಶೇಷ ದಂಡ ಶುಲ್ಕ ರೂ.1680 ಒಟ್ಟು ದಂಡಶುಲ್ಕ ರೂ.2184 (ನಿಯಮಾನುಸಾರ ಶುಲ್ಕ+ಒಟ್ಟು ದಂಡ ಶುಲ್ಕ)**

(ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ)

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಗೆ:

1. ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ-ಮಾಹಿತಿಗಾಗಿ
2. 'ಇ' ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ,
3. ಕಛೇರಿ ಪ್ರತಿ.